**May 25, 2024**
**ALL INDIA RADIO- DHARWAD**
**PRADESH SAMACHARA (KANNADA) 7:05 AM**

**ಮುಖ್ಯಾಂಶಗಳು**

- **ಲೋಕಸಭೆ ಚುನಾವಣೆ ಫಲಿತಾಂಶದ ನಂತರ ಜಿಲ್ಲಾ ಹಾಗೂ ತಾಲೂಕು ಪಂಚಾಯಿತಿ ಚುನಾವಣೆ–ಮುಖ್ಯಮಂತ್ರಿ ಸಿದ್ದರಾಮಯ್ಯ**

- **ರಾಜ್ಯದಲ್ಲಿ ಕೈಗಾರಿಕಾ ಸ್ನೇಹಿ ವಾತಾವರಣ: ಬಂಡವಾಳ ಹೂಡಲು ಹಲವು ಕಂಪೆನಿಗಳ ಆಸಕ್ತಿ– ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ.**

- **ರಾಜ್ಯದಲ್ಲಿ ಅಧಿಕಾರ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ಎಲ್ಲ ರಂಗಗಳಲ್ಲೂ ವಿಫಲ– ಕೇಂದ್ರ ಸಚಿವ ಪ್ರಲ್ಹಾದ ಜೋಶಿ.**

- **ಮುಂಗಾರು ಮಳೆ ಅವಘಡಗಳನ್ನು ತಡೆಯುವ ನಿಟ್ಟಿನಲ್ಲಿ ವಿವಿಧ ಜಿಲ್ಲಾಡಳಿತಗಳಿಂದ ಅಗತ್ಯ ಮುನ್ನೆಚ್ಚರಿಕಾ ಕ್ರಮ.**

**ಈಗ ವಾರ್ತೆಗಳ ವಿವರ**
***********

**ಲೋಕಸಭೆ ಚುನಾವಣೆ ಫಲಿತಾಂಶ ಪ್ರಕಟಗೊಂಡ ಬಳಿಕ ಜಿಲ್ಲಾ ಹಾಗೂ ತಾಲೂಕು ಪಂಚಾಯಿತಿ ಚುನಾವಣೆ ನಡೆಸಲಾಗುವುದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ತಿಳಿಸಿದ್ದಾರೆ.**

**ಮೈಸೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ಚುನಾವಣೆ ನಡೆಸಲು ಸರ್ಕಾರ ಸಿದ್ಧವಿದೆ. ಕ್ಷೇತ್ರ ಪುನರ್ ವಿಂಗಡಣೆ, ಮೀಸಲಾತಿ ನಿಗದಿ ಮುಂತಾದ ಪ್ರಕ್ರಿಯೆಗಳನ್ನು ಆದಷ್ಟು ಬೇಗ ಪೂರ್ಣಗೊಳಿಸಿ, ಚುನಾವಣೆ ನಡೆಸಲಾಗುವುದು ಎಂದರು.**

ಕ್ಷೇತ್ರ ಪುನರ್ ವಿಂಗಡಣೆಗೆ ಸಂಬಂಧಿಸಿದಂತೆ ಜನವರಿ ಅಂತ್ಯದವರೆಗೆ ಗಡುವು ಇತ್ತು. ಆ ಗಡುವು ಮುಕ್ತಾಯವಾಗಿರುವ ಹಿನ್ನೆಲೆಯಲ್ಲಿ ಅಡ್ವೋಕೇಟ್ ಜನರಲ್ ಅವರೊಂದಿಗೆ ಚರ್ಚಿಸಿ ಮುಂದಿನ ನಿರ್ಧಾರ ಕೈಗೊಳ್ಳಲಾಗುವುದು. ಕ್ಷೇತ್ರ ಪುನರ್‌ವಿಂಗಡನೆ ನಂತರ ಮೀಸಲಾತಿ ಪ್ರಕಟಿಸುತ್ತೇವೆ ಎಂದು ಸಿದ್ದರಾಮಯ್ಯ ಹೇಳಿದರು.

*******

ರಾಜ್ಯದಲ್ಲಿ ಕೈಗಾರಿಕಾ ಸ್ನೇಹಿ ವಾತಾವರಣವಿದ್ದು, ಬಂಡವಾಳ ಹೂಡಲು ಅನೇಕ ಹೂಡಿಕೆದಾರರು ಆಸಕ್ತಿ ವಹಿಸಿದ್ದಾರೆ ಎಂದು ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ ಹೇಳಿದ್ದಾರೆ.

ಬೆಂಗಳೂರಿನಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯ ಪ್ರಗತಿ, ಅಭಿವೃದ್ಧಿ, ಶಾಂತಿಯ ನಾಡು ಎನ್ನುವುದು ಇಡೀ ದೇಶಕ್ಕೆ ಗೊತ್ತಿದೆ. ರಾಜ್ಯದಲ್ಲಿ ಬಂಡವಾಳ ಹೂಡಲು ಹೆಚ್ಚಿನ ಸಂಖ್ಯೆಯಲ್ಲಿ ಕಂಪೆನಿಗಳು ಮುಂದೆ ಬರುತ್ತಿವೆ. ಹೀಗಿದ್ದರೂ ಬಿಜೆಪಿ ನಾಯಕರು ಸರ್ಕಾರದ ವಿರುದ್ಧ ಆರೋಪ ಮಾಡುತ್ತಿದ್ದಾರೆ. ಅವು ಸತ್ಯಕ್ಕೆ ದೂರವಾದುವು ಎಂದರು.

ಲೋಕಸಭಾ ಚುನಾವಣಾ ಫಲಿತಾಂಶದ ಬಳಿಕ ಹೂಡಿಕೆದಾರರ ಮಾಹಿತಿ ಬಹಿರಂಗ ಪಡಿಸಲಾಗುವುದು ಎಂದು ಡಿ.ಕೆ.ಶಿವಕುಮಾರ್ ಹೇಳಿದರು.

*******

ರಾಜ್ಯದಲ್ಲಿ ಅಧಿಕಾರ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ಎಲ್ಲ ರಂಗಗಳಲ್ಲೂ ವಿಫಲವಾಗಿದೆ ಎಂದು ಕೇಂದ್ರ ಸಚಿವ ಪ್ರಲ್ಹಾದ ಜೋಶಿ ಟೀಕಿಸಿದ್ದಾರೆ.

ಬಳ್ಳಾರಿಯಲ್ಲಿ ನಿನ್ನೆ ಸುದ್ದಿಗಾರರೊಂದಿಗೆ ಮಾತನಾಡಿದ ಅವರು, ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಕುಸಿದಿದ್ದು, ಸರ್ಕಾರ ಸಮಾಜ ವಿರೋಧಿ ಶಕ್ತಿಗಳ ಪರವಾಗಿದೆ. ಕಳೆದೊಂದು ವ ್ಷದ ಅವಧಿಯಲ್ಲಿ ರಾಜ್ಯ ಸರ್ಕಾರದ ಸಾಧನೆ ಶೂನ್ಯವಾಗಿದೆ ಎಂದು ಸಚಿವ ಪ್ರಲ್ಹಾದ್ ಜೋಶಿ ಆರೋಪಿಸಿದರು.

*******

ಬೆಂಗಳೂರಿನ ಅವ್ಯವಸ್ಥೆಗಳ ವಿರುದ್ಧ ಇದೇ 28 ರಂದು ಪಕ್ಷದ ವತಿಯಿಂದ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗಿದೆ ಎಂದು ಬಿಜೆಪಿ ರಾಜ್ಯಾಧ್ಯಕ್ಷ ಬಿ.ವೈ.ವಿಜಯೇಂದ್ರ ಹೇಳಿದ್ದಾರೆ.

ಬೆಂಗಳೂರಿನ ಸಮಸ್ಯೆಗಳ ಕುರಿತು ನಿನ್ನೆ ನಡೆದ ಬಿಜೆಪಿ ಹಿರಿಯ ನಾಯಕರ ಸಭೆಯಲ್ಲಿ ಮಾತನಾಡಿದ ಅವರು, ನಗರದಲ್ಲಿನ ಪ್ರತಿ ವಾರ್ಡ್‌ನ ಸಮಸ್ಯೆಗಳಿಗೆ ಪರಿಹಾರ ಕಲ್ಪಿಸಲು ಎಲ್ಲ ವಾರ್ಡ್‌ಗಳಲ್ಲಿ ಹೋರಾಟ ನಡೆಯುತ್ತಿದೆ ಎಂದರು.

ಸಭೆಯಲ್ಲಿ ವಿಧಾನಸಭೆ ವಿರೋಧ ಪಕ್ಷದ ನಾಯಕ ಆರ್.ಅಶೋಕ, ಹಿರಿಯ ನಾಯಕರಾದ ಡಿ.ವಿ.ಸದಾನಂದಗೌಡ, ಡಾಕ್ಟರ್ ಸಿ.ಎನ್.ಅಶ್ವತ್ಥನಾರಾಯಣ, ಗೋಪಾಲಯ್ಯ, ಬೈರತಿ ಬಸವರಾಜ್, ಸಂಸದರಾದ ಪಿ.ಸಿ.ಮೋಹನ್, ಲೆಹರ್ ಸಿಂಗ್ ಸಿರೋಯ ಸೇರಿದಂತೆ ಹಲವು ನಾಯಕರು ಪಾಲ್ಗೊಂಡಿದ್ದರು.

*******

ಪ್ರಸ್ತುತ ಮುಂಗಾರು ಸಂದರ್ಭದಲ್ಲಿ ತಲೆದೋರುವ ಯಾವುದೇ ರೀತಿಯ ವಿಪತ್ತುಗಳನ್ನು ಸಮರ್ಥವಾಗಿ ಎದುರಿಸಲು ಎಲ್ಲಾ ಇಲಾಖೆಗಳು ಸನ್ನದ್ದರಾಗುವಂತೆ ಉತ್ತರಕನ್ನಡ ಜಿಲ್ಲಾಧಿಕಾರಿ ಗಂಗೂಬಾಯಿ ಮಾನಕರ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ.

ಮುಂಗಾರು ಸಂದರ್ಭದಲ್ಲಿ ಕೈಗೊಳ್ಳಬೇಕಾದ ಮುಂಜಾಗ್ರತಾ ಕ್ರಮಗಳ ಕುರಿತು ಜಿಲ್ಲಾಧಿಕಾರಿ ಕಚೇರಿಯಲ್ಲಿ ನಿನ್ನೆ ನಡೆದ ಸಭೆಯಲ್ಲಿ ಈ ಸೂಚನೆ ನೀಡಿದ ಅವರು, ಜಿಲ್ಲೆಯ ಜಿಲ್ಲೆಯ ಎಲ್ಲಾ ನಗರ ಸ್ಥಳೀಯ ಸಂಸ್ಥೆಗಳು ಹಾಗೂ ಗ್ರಾಮ ಪಂಚಾಯತ್ ಗಳಲ್ಲಿ ಒಳ ಚರಂಡಿ ಹಾಗೂ ನೀರು ಹರಿದು ಹೋಗುವ ಕಾಲುವೆಗಳನ್ನು ಸ್ವಚ್ಛಗೊಳಿಸಬೇಕು. ಗ್ರಾಮೀಣ ಮಟ್ಟದಲ್ಲಿ ಹಾಗೂ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಗಳಲ್ಲಿ ಸಮಸ್ಯೆಗಳಿಗೆ ಸ್ಪಂದಿಸಲು 24 ಗಂಟೆ ಕಾರ್ಯ ನಿರ್ವಹಿಸುವ ಕಂಟ್ರೋಲ್ ರೂಮ್ ಸ್ಥಾಪಿಸುವಂತೆ ತಿಳಿಸಿದರು.

*******

ಮಳೆಗಾಲ ಆರಂಭವಾಗಿದ್ದು, ಜಿಲ್ಲೆಯಲ್ಲಿ ಡೆಂಗ್ಯೂ ನಿಯಂತ್ರಣಕ್ಕೆ ಮುಂಜಾಗ್ರತಾ ಕ್ರಮ ಕೈಗೊಳ್ಳುವಂತೆ ಹಾವೇರಿ ಜಿಲ್ಲಾಧಿಕಾರಿ ರಘುನಂಧನ್ ಮೂರ್ತಿ ಅಧಿಕಾರಿಗಳಿಗೆ ಸೂಚಿಸಿದ್ದಾರೆ.

ಜಿಲ್ಲಾಧಿಕಾರಿ ಕಚೇರಿ ಸಭಾಂಗಣದಲ್ಲಿ ನಿನ್ನೆ ನಡೆದ ಜಿಲ್ಲಾ ಅಂತರ್ ಇಲಾಖಾ ಸಮನ್ವಯ ಸಮಿತಿ ಸಭೆಯಲ್ಲಿ ಈ ಸೂಚನೆ ನೀಡಿದ ಅವರು, ಮಳೆ ಆರಂಭವಾಗಿರುವುದರಿಂದ ನಿಂತ ನೀರಿನಲ್ಲಿ ಸೊಳ್ಳೆಗಳು ಉತ್ಪತ್ತಿಯಾಗುತ್ತವೆ. ಸೊಳ್ಳೆ ಉತ್ಪತ್ತಿ ತಾಣಗಳ ಮೇಲೆ ತೀವ್ರ ನಿಗಾವಹಿಸಬೇಕು ಹಾಗೂ ಸಾರ್ವಜನಿಕರಿಗೆ ಮುಂಜಾಗ್ರತಾ ಕ್ರಮಗಳ ಕುರಿತು ಜಾಗೃತಿ ಮೂಡಿಸುವ ಮೂಲಕ ಡೆಂಗ್ಯೂ ನಿಯಂತ್ರಣಕ್ಕೆ ಕ್ರಮ ಕೈಕೊಳ್ಳಬೇಕು ಎಂದು ಹೇಳಿದರು.

*******

ಎರಡು ದಿನಗಳ ಹಿಂದೆ ಬಾಗಲಕೋಟೆ ಜಿಲ್ಲೆಯಲ್ಲಿ ಸುರಿದ ಭಾರಿ ಮಳೆ ಹಾಗೂ ಗಾಳಿಯಿಂದ ಉಂಟಾದ ಹಾನಿಗೆ ಸೂಕ್ತ ಪರಿಹಾರ ನೀಡಲು ಕ್ರಮ ಕೈಗೊಳ್ಳಲಾಗುತ್ತಿದೆ ಎಂದು ಜಿಲ್ಲಾ ವಿಪತ್ತು ನಿರ್ವಹಣಾ ಪ್ರಾಧಿಕಾರದ ಅಧ್ಯಕ್ಷೆಯೂ ಆಗಿರುವ ಜಿಲ್ಲಾಧಿಕಾರಿ ಜಾನಕಿ ಕೆ.ಎಂ ತಿಳಿಸಿದ್ದಾರೆ.

ಈ ಕುರಿತು ಪ್ರಕಟಣೆ ಬಿಡುಗಡೆ ಮಾಡಿರುವ ಅವರು, ಹಾನಿಯಾದ ಪ್ರದೇಶಗಳಿಗೆ ಸಂಬಂಧಿಸಿದ ಅಧಿಕಾರಿಗಳು ಭೇಟಿ ನೀಡಿ, ಹಾನಿ ಕುರಿತು ಸಂಪೂರ್ಣ ವರದಿ ನೀಡುವಂತೆ ಸೂಚಿಸಲಾಗಿದೆ. ವರದಿ ಆಧಾರದ ಮೇಲೆ ಸೂಕ್ತ ಪರಿಹಾರ ನೀಡಲು ಸಂಬಂಧಿಸಿದ ಅಧಿಕಾರಿಗಳಿಗೆ ಸೂಚನೆ ನೀಡಲಾಗಿದೆ ಎಂದಿದ್ದಾರೆ.

*******

ಪ್ರದೇಶ ಸಮಾಚಾರ ಕೇಳುತ್ತಿದ್ದೀರಿ

*******

ಮುಂದಿನ 24 ಗಂಟೆಗಳಲ್ಲಿ, ರಾಜ್ಯದ ದಕ್ಷಿಣ ಕನ್ನಡ, ಉಡುಪಿ, ಧಾರವಾಡ, ಹಾವೇರಿ, ಶಿವಮೊಗ್ಗ, ಚಿಕ್ಕಮಗಳೂರು, ಚಿತ್ರದುರ್ಗ, ಮೈಸೂರು, ತುಮಕೂರು, ಕೊಡುಗು ಜಿಲ್ಲೆಗಳಲ್ಲಿ ಧಾರಾಕಾರ ಮಳೆಯಾಗುವ ಸಂಭವವಿದೆ ಎಂದು ಭಾರತೀಯ ಹವಾಮಾನ ಇಲಾಖೆ ಮುನ್ಸೂಚನೆ ನೀಡಿದೆ.

ಸಂಕೇಶ್ವರ, ನಾಪೋಕ್ಲು, ಕಿರವತ್ತಿ, ಮೂರ್ನಾಡು, ಭಾಗಮಂಡಲ, ನಿಪ್ಪಾಣಿ, ಚಿಕ್ಕೋಡಿ, ಮುದ್ದೇಬಿಹಾಳ, ಧಾರವಾಡ, ಸೇರಿದಂತೆ ನಿನ್ನೆ ಅನೇಕ ಜಿಲ್ಲೆಗಳಲ್ಲಿ ಮಳೆಯಾಗಿದೆ.

ಬೆಂಗಳೂರು ಸುತ್ತಮುತ್ತ ಸಾಮಾನ್ಯವಾಗಿ ಮೋಡಕವಿದ ವಾತಾವರಣವಿರಲಿದ್ದು, ಹಗುರ ಮತ್ತು ಸಾಧಾರಣ ಮಳೆಯಾಗುವ ಸಾಧ್ಯತೆ ಇದೆ ಎಂದು ಇಲಾಖೆ ಮಾಹಿತಿ ನೀಡಿದೆ.

*******

ವಿವಿಧೆಡೆ ನಿನ್ನೆ ರಾತ್ರಿ ಧಾರಾಕಾರ ಮಳೆಯಾಗಿದ್ದು ಜನಜೀವನ ಅಸ್ತವ್ಯಸ್ಥಗೊಂಡಿತ್ತು.

ಹಾಸನ ನಗರದಲ್ಲಿ ಸುಮಾರು ಒಂದು ಗಂಟೆಗೂ ಹೆಚ್ಚು ಕಾಲ ಸುರಿದ ಧಾರಾಕಾರ ಮಳೆಗೆ ವಿವಿದೆಡೆ ರಸ್ತೆಗಳು ಸಂಪೂರ್ಣ ಜಲಾವೃತವಾಗಿದ್ದು, ಕೆಲವೆಡೆ ವಿದ್ಯುತ್ ಕಂಬಗಳು ನೆಲಕ್ಕೆ ಉರುಳಿದವು. ಇನ್ನು ಕೆಲವು ಕಡೆಗಳಲ್ಲಿ ರಸ್ತೆಗಳಿಗೆ ಅಡ್ಡಲಾಗಿ ಹಾಗೂ ವಾಹನಗಳ ಮೇಲೆ ಮರಗಳು ಬಿದ್ದ ಪರಿಣಾಮ ವಾಹನಗಳು ನುಜ್ಜುಗುಜ್ಜಾಗಿವೆ.

*******

ಪ್ರಸಕ್ತ ಸಾಲಿನ ಮುಂಗಾರು ಹಂಗಾಮಿನ ಬಿತ್ತನೆ ಬೀಜ ವಿತರಣೆಗೆ ಚಿತ್ರದುರ್ಗ ಜಿಲ್ಲೆಯಲ್ಲಿ ಒಟ್ಟು 31810 ಕ್ವಿಂಟಾಲ್ ಬಿತ್ತನೆ ಬೀಜ ದಾಸ್ತಾನು ಮಾಡಲಾಗಿದೆ ಎಂದು ಕೃಷಿ ಇಲಾಖೆ ಜಂಟಿ ನಿರ್ದೇಶಕರು ತಿಳಿಸಿದ್ದಾರೆ.

ಸೂಕ್ತ ವಿತರಣೆಗಾಗಿ ಹೋಬಳಿ ಮಟ್ಟದ 22 ರೈತ ಸಂಪರ್ಕ ಕೇಂದ್ರಗಳಲ್ಲಿ ಬಿತ್ತನೆ ಬೀಜ ಕೇಂದ್ರಗಳನ್ನು ಸ್ಥಾಪಿಸಲಾಗಿದೆ. ರಸಗೊಬ್ಬರ ಮತ್ತು ಬಿತ್ತನೆ ಬೀಜದ ಕೊರತೆ ಇಲ್ಲ ರೈತರು ರಿಯಾಯಿತಿ ದರದಲ್ಲಿ ಬಿತ್ತನೆ ಬೀಜ ಹಾಗೂ ಗೊಬ್ಬರ ಪಡೆಯಬಹುದು ಎಂದು ಮಾಹಿತಿ ನೀಡಿದ್ದಾರೆ.

*******

ಬೆಂಗಳೂರಿನ ಲಾಲ್‌ಬಾಗ್‌ನಲ್ಲಿ ನಿನ್ನೆಯಿಂದ ಮಾವು ಮತ್ತುಹಲಸು ಮೇಳ ಆರಂಭವಾಗಿದೆ.

ಕೋಲಾರ, ಬೆಂಗಳೂರು ಗ್ರಾಮಾಂತರ, ಹಾವೇರಿ, ಧಾರವಾಡ ಸೇರಿದಂತೆ ರಾಜ್ಯದ ವಿವಿಧ ಭಾಗಗಳಿಂದ ಮಾವು ಹಾಗೂ ಹಲಸು ಬೆಳೆಗಾರರು ಮೇಳದಲ್ಲಿ ಭಾಗಿಯಾಗಿದ್ದಾರೆ. ಜೂನ್ 10 ರವರೆಗೆ ನಡೆಯಲಿರುವ ಮೇಳದಲ್ಲಿ ಗ್ರಾಹಕರಿಗೆ ಉತ್ತಮ ಗುಣಮಟ್ಟದ, ಸಹಜವಾಗಿ ಮಾಗಿದ ಹಣ್ಣುಗಳನ್ನು ಕಡಿಮೆ ಬೆಲೆಯಲ್ಲಿ ಮಾರಾಟ ಮಾಡುತ್ತಿರುವುದು ವಿಶೇಷವಾಗಿದೆ.

*******

ಕೋಲಾರ ಜಿಲ್ಲೆಯಲ್ಲಿ 106 ಕೆರೆಗಳ ಒತ್ತುವರಿ ತೆರವು ಕಾರ್ಯಾಚರಣೆ ಬಾಕಿಯಿದ್ದು, ಜೂನ್ 10 ರೊಳಗೆ ಈ ಬಗ್ಗೆ ಸೂಕ್ರ ಕ್ರಮಕೈಗೊಳ್ಳಬೇಕು ಎಂದು ಸಂಬಂಧಪಟ್ಟ ಅಧಿಕಾರಿಗಳಿಗೆ ಜಿಲ್ಲಾಧಿಕಾರಿ ಅಕ್ರಂ ಪಾ ಾ ಸೂಚಿಸಿದ್ದಾರೆ.

ಜಿಲ್ಲೆಯಲ್ಲಿನ ಕೆರೆಗಳ ಸಂಕ್ಷಣೆಗೆ ಕೈಗೊಂಡಿರುವ ಕ್ರಮಗಳ ಬಗ್ಗೆ, ಜಿಲ್ಲಾಧಿಕಾರಿ ಕಚೇರಿಯಲ್ಲಿ ನಿನ್ನೆ ನಡೆದ ಸಭೆಯಲ್ಲಿ ಈ ಸೂಚನೆ ನೀಡಿದ ಅವರು, ಕೋಲಾರದಲ್ಲಿ–19, ಮಾಲೂರು–35, ಮುಳಬಾಗಿಲು–20, ಬಂಗಾರಪೇಟೆ–14, ಕೆಜಿಎಫ್–12 ಹಾಗೂ ಶ್ರೀನಿವಾಸಪುರ–6 ಸೇರಿದಂತೆ ಜಿಲ್ಲೆಯಲ್ಲಿ ಒಟ್ಟು 106 ಕೆರೆಗಳ ಒತ್ತುವರಿ ತೆರವುಗೊಳಿಸಬೇಕಾಗಿದ್ದು ಈ ಕುರಿತು ಸಣ್ಣ ನೀರಾವರಿ ಇಲಾಖೆ, ಗ್ರಾಮೀಣಾಭಿವೃದ್ಧಿ ಹಾಗೂ ಪಂಚಾಯತರಾಜ್ ಇಲಾಖೆಗಳ ಸಹಯೋಗದಲ್ಲಿ ಶೀಘ್ರವೇ ಕಾರ್ಯತಂತ್ರ ರೂಪಿಸಬೇಕು ಎಂದರು.

*******

ಮಂಗಳೂರು ನಗರದಲ್ಲಿ ಫುಟಪಾತ್ ಒತ್ತುವರಿ ಹಾಗೂ ವಾಹನಗಳ ಪಾರ್ಕಿಂಗ್ ಉಲ್ಲಂಘನೆಗೆ ಸಂಬಂಧಿಸಿ ಸೂಕ್ತ ಕಾರ್ಯಾಚರಣೆ ನಡೆಸಲಾಗುವುದು ಎಂದು ಪೊಲೀಸ್ ಆಯುಕ್ತ ಅನುಪಮ್ ಅಗರ್ವಾಲ್ ಹೇಳಿದ್ದಾರೆ.

ಮಂಗಳೂರು ಪೊಲೀಸ್ ಕಮಿ ೯ನರ್ ಕಚೇರಿಯಲ್ಲಿ ನಿನ್ನೆ ನಡೆದ ಫೋನ್ ಇನ್ ಕಾರ್ಯಕ್ರಮದಲ್ಲಿ ಮಾತನಾಡಿದ ಅವರು, ನಗರದ ಪ್ರಮುಖ ರಸ್ತೆಗಳನ್ನು ಆಕ್ರಮಿಸಿ ವ್ಯಾಪಾರ ವಹಿವಾಟು ನಡೆಯುತ್ತಿದ್ದು, ವಾಹನ ಸಂಚಾರಕ್ಕೂ ತೊಡಕಾಗಿದೆ. ಈ ಬಗ್ಗೆ ಸಾರ್ವಜನಿಕರಿಂದ ದೂರುಗಳು ಬಂದಿದ್ದು, ಮಂಗಳೂರಲ್ಲಿ ಸಂಚಾರ ಸಮಸ್ಯೆ ನಿವಾರಣೆಗೆ ಮಹಾನಗರ ಪಾಲಿಕೆ, ಸ್ಮಾರ್ಟಸಿಟಿ ಹಾಗೂ ಜಿಲ್ಲಾಡಳಿತದ ಸಹಕಾರದೊಂದಿಗೆ ಕ್ರಮ ಕೈಗೊಳ್ಳಲಾಗುವುದು ಎಂದರು.

*******

ರಾಜ್ಯದಲ್ಲಿ ನಿನ್ನೆ ಸಂಭವಿಸಿದ ಎರಡು ಪ್ರತ್ಯೇಕ ಅಪಘಾತಗಳಲ್ಲಿ 8 ಮಂದಿ ಮೃತಪಟ್ಟಿದ್ದಾರೆ.

ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲೂಕಿನಲ್ಲಿ ಸಂಭವಿಸಿದ ಅಪಘಾತದಲ್ಲಿ ಒಂದೇ ಕುಟುಂಬದ ನಾಲ್ವರು ಮೃತಪಟ್ಟಿದ್ದು, ಮೂವರು ಗಂಭೀರವಾಗಿ ಗಾಯಗೊಂಡಿದ್ದಾರೆ. ಹಾವೇರಿ ಜಿಲ್ಲೆಯ ರಾಣೆಬೆನ್ನೂರು ಬಳಿ ಸಂಭವಿಸಿದ ಮತ್ತೊಂದು ರಸ್ತೆ ಅಪಘಾತದಲ್ಲಿ ನಾಲ್ವರು ಮೃತಪಟ್ಟಿದ್ದು, ಆರು ಮಂದಿ ಗಾಯಗೊಂಡಿದ್ದಾರೆ.

*******

ಈಗ ಸಂಕ್ಷಿಪ್ತ ಸುದ್ದಿಗಳು

ಚಿಕ್ಕಮಗಳೂರು ಜಿಲ್ಲೆಯಲ್ಲಿ ಬರಪೀಡಿತ ತಾಲ್ಲುಕುಗಳ 38 ಸಾವಿರದ 392 ರೈತರ ಖಾತೆಗೆ ಒಟ್ಟು 31 ಕೋಟಿ 32 ಲಕ್ಷ ರೂಪಾಯಿಗಳನ್ನು ಜಮೆ ಮಾಡಲಾಗಿದೆ ಎಂದು ಜಿಲ್ಲಾಧಿಕಾರಿ ಮೀನಾ ನಾಗರಾಜ್ ತಿಳಿಸಿದ್ದಾರೆ.

ಬೆಂಗಳೂರು ಗ್ರಾಮಾಂತರ ಜಿಲ್ಲೆಯ ದೊಡ್ಡಬಳ್ಳಾಪುರದ ಶ್ರೀ ಧರ್ಮರಾಯಸ್ವಾಮಿ ದೇವಾಲಯದಲ್ಲಿ ಪ್ರಸಿದ್ಧ ಶ್ರೀ ಆದಿಶಕ್ತ್ಯಾತ್ಮಕ ದ್ರೌಪದಾದೇವಿ ಕರಗ ಮಹೋತ್ಸವ ನಿನ್ನೆ ವಿಜೃಂಭಣೆಯಿಂದ ನಡೆಯಿತು,

*******

ಕೊನೆಯಲ್ಲಿ ಮತ್ತೊಮ್ಮೆ ಮುಖ್ಯಾಂಶಗಳು

ಲೋಕಸಭೆ ಚುನಾವಣೆ ಫಲಿತಾಂಶದ ನಂತರ ಜಿಲ್ಲಾ ಹಾಗೂ ತಾಲೂಕು ಪಂಚಾಯಿತಿ ಚುನಾವಣೆ–ಮುಖ್ಯಮಂತ್ರಿ ಸಿದ್ದರಾಮಯ್ಯ

ರಾಜ್ಯದಲ್ಲಿ ಕೈಗಾರಿಕಾ ಸ್ನೇಹಿ ವಾತಾವರಣ: ಬಂಡವಾಳ ಹೂಡಲು ಹಲವು ಕಂಪೆನಿಗಳ ಆಸಕ್ತಿ– ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ.

ರಾಜ್ಯದಲ್ಲಿ ಅಧಿಕಾರ ನಡೆಸುತ್ತಿರುವ ಕಾಂಗ್ರೆಸ್ ಸರ್ಕಾರ ಎಲ್ಲ ರಂಗಗಳಲ್ಲೂ ವಿಫಲ– ಕೇಂದ್ರ ಸಚಿವ ಪ್ರಲ್ಹಾದ ಜೋಶಿ.

ಮುಂಗಾರು ಮಳೆ ಅವಘಡಗಳನ್ನು ತಡೆಯುವ ನಿಟ್ಟಿನಲ್ಲಿ ವಿವಿಧ ಜಿಲ್ಲಾಡಳಿತಗಳಿಂದ ಅಗತ್ಯ ಕ್ರಮ.

ಇಲ್ಲಿಗೆ ಪ್ರದೇಶ ಸಮಾಚಾರ ಮುಕ್ತಾಯವಾಯಿತು

ನಮ್ಮ ಮುಂದಿನ ರಾಷ್ಟ್ರೀಯ ವಾರ್ತೆ 7 ಗಂಟೆ 35 ನಿಮಿಷಕ್ಕೆ

******